ದಿನಾಂಕಃ 12-01-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಹೆಚ್ ಟಿ ವಕೀಲರಿಂದಃ**

ಈ ದಾವೆ ಹೂಡಲು ವಕೀಲರಿಗೆ ಮಾಹಿತಿಯನ್ನು ನಾನೇ ಕೊಟ್ಟಿರುತ್ತೇನೆ. ಈ ದಾವೆಗೆ ನಾನು ಹಾಜರುಪಡಿಸಿರುವ ದಾಖಲಾತಿಗಳ ಬಗ್ಗೆ ನನಗೆ ಮಾಹಿತಿ ಇದೆ. 2 ನೇ ಪ್ರತಿವಾದಿ ಈ ದಾವೆಗೆ ಸಲ್ಲಿಸಿರುವ ತಕರಾರಿನ ಬಗ್ಗೆ ತಿಳಿದುಕೊಂಡಿದ್ದೀರ ಎಂದರೆ ಸಾಕ್ಷಿ ನಾನು ಕೊಡುವುದನ್ನು ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ಈ ದಾವೆಯನ್ನು ನಾನು ಪ್ರತಿವಾದಿಯರು ಮಾಡಿರುವ ದಾನಪತ್ರವನ್ನು ನಿಲ್ಲಿಸುವ ಸಲುವಾಗಿ ಹೂಡಿರುತ್ತೇನೆ. ನಾನು ದಾವಾಸ್ತಿಗೆ ಸಂಬಂಧಪಟ್ಟಂತೆ 2008 ರಲ್ಲಿ ವಿಭಾಗ ಮಾಡಿಕೊಂಡಿರುವುದಾಗಿ ನನ್ನ ದಾವಾಪತ್ರದಲ್ಲಿ ತಿಳಿಸಿದ್ದೇನೆ ಎಂದರೆ ಸರಿ. ಸದರಿ 2008 ರಲ್ಲಿ ವಿಭಾಗ ಪತ್ರವಾಗುವ ಕಾಲಕ್ಕೆ 2 ನೇ ಪ್ರತಿವಾದಿ ಅಪ್ರಾಪ್ತ ವಯಸ್ಕರಾಗಿದ್ದರು ಎಂದರೆ ಸರಿ. ಹಾಗಾಗಿ ಸದರಿ 2 ನೇ ಪ್ರತಿವಾದಿಗೆ ಸದರಿ ವಿಭಾಗ ಪತ್ರದ ಬಗ್ಗೆ ಮಾಹಿತಿ ಇಲ್ಲ ಎಂದರೆ ಸಾಕ್ಷಿ ಅವರ ತಾಯಿಗೆ ಗೊತ್ತಿದೆ ಎಂದು ನುಡಿಯುತ್ತಾರೆ. ನಾನು 2008 ರಲ್ಲಿ ಆದ ನಿಪಿ-1 ರ ಆಧಾರದ ಮೇಲೆ ಈ ದಾವೆ ಹೂಡಿದ್ದೇನೆ ಎಂದರೆ ಸರಿ. ನಿಪಿ-1 ರ ಆಧಾರದ ಮೇಲೆ ಇದುವರೆಗೂ ಅವರವರ ಹೆಸರಿಗೆ ಯಾವುದೇ ಖಾತೆ ಪಹಣಿಯಾಗಿಲ್ಲ ಎಂದರೆ ಸಾಕ್ಷಿ ನಮಗೆ ಗೊತ್ತಿಲ್ಲದಂತೆ ಮಾಡಿಕೊಂಡಿದ್ದಾರೆ ಎಂದು ನುಡಿಯುತ್ತಾರೆ.

(ಮುಂದುವರಿದ ಪಾಟೀ ಸವಾಲಿಗೆ ಪ್ರತಿವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದರಿಂದ ಸಮಯಾವಕಾಶ ನೀಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

02 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ.ಚನ್ನಗಿರಿ.